ದಿನಾಂಕ ಃ 09.12.2022 ಎಂ.ವಿ.ಸಿ ನಂ.70/2022 ರಲ್ಲಿ

ಪಿ.ಡಬ್ಲ್ಯೂ-1(ಸಿದ್ದಪ್ಪಾಜಿ)

ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ಅರ್ಜಿದಾರರ ಪರ ವಕೀಲರಿಂದಃ

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ಪ್ರಥಮ ವರ್ತಮಾನ ವರದಿಯ ಯಥಾ ನಕಲನ್ನು ನಿಪಿ-1, ದೂರಿನ ಯಥಾ ನಕಲನ್ನು ನಿಪಿ-2, ಸ್ಥಳ ಪಂಚನಾಮೆಯ ಯಥಾ ನಕಲನ್ನು ನಿಪಿ-3, ಅಮಾನತು ಪಂಚನಾಮೆಯ ಯಥಾ ನಕಲನ್ನು ನಿಪಿ-4, ದೋಷಾರೋಪಣಾ ಪಟ್ಟಿಯ ಯಥಾ ನಕಲನ್ನು ನಿಪಿ-5, ಗಾಯದ ಪ್ರಮಾಣ ಪತ್ರದ ಯಥಾ ನಕಲನ್ನು ನಿಪಿ-6, 2 ಐ.ಎಂ.ವಿ ವರದಿಗಳ ಯಥಾ ನಕಲುಗಳನ್ನು ಕ್ರಮವಾಗಿ ನಿಪಿ-7 ಮತ್ತು ನಿಪಿ-8, 15 ವೈದ್ಯಕೀಯ ಬಿಲ್ಲುಗಳನ್ನು ಹಾಜರು ಮಾಡಿದ್ದು ಅವುಗಳನ್ನು ಒಟ್ಟಾಗಿ ನಿಪಿ-9, ವೈದ್ಯರ 27 ಸಲಹಾ ಚೀಟಿಗಳನ್ನು ಹಾಜರು ಮಾಡಿದ್ದು ಅವುಗಳನ್ನು ಒಟ್ಟಾಗಿ ನಿಪಿ-10 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಯನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಸರಸ್ವತಿ ಕೆ.ಎನ್.)
ರಾಮನಗರದ ಮೋಟಾರು ವಾಹನಗಳ ಅಪಘಾತದ
ಪರಿಹಾರಗಳ ಹೆಚ್ಚುವರಿ ನ್ಯಾಯ ಮಂಡಳಿಯ
ಪೀಠಾಧಿಕಾರಿಗಳು.